ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 901 (1240)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಡೇಟಾ ಎಂಟ್ರಿ ಆಪರೇಟರ್‌ಗಳ ಬಗ್ಗೆ

(ಅ) ಸರ್ಕಾರವು ಗ್ರಾಮ ಪಂಚಾಯತಿಗಳಿಗೆ ಮಂಜೂರಾತಿ ನೀಡಿರುವ ಡೇಟಾ ಎಂಟ್ರಿ ಆಪರೇಟರ್ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಮಂಜೂರಾದ ಡೇಟಾ ಎಂಟ್ರಿ ಆಪರೇಟರ್ ಒಂದು ಹುದ್ದೆಯಲ್ಲಿ ಗ್ರಾಮ ಪಂಚಾಯತಿಗಳ ಕಾರ್ಯ ಒತ್ತಡದ ನಡುವೆ ಬಾಪೂಜಿ ಸೇವಾ ಕೇಂದ್ರದ ಬಹುಪಾಲು ಸೇವೆಗಳು ಗ್ರಾಮ ಪಂಚಾಯತಿ ಮೂಲಕ ಸಾರ್ವಜನಿಕರಿಗೆ ತಲುಪುತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ;

(ಇ) ತಳ ಹಂತದಲ್ಲಿ ಸ್ಥಳೀಯ ಸರ್ಕಾರವಾಗಿ ಕಾರ್ಯನಿರ್ವಹಿಸಿ ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳನ್ನು ಸೇವೆಗಳನ್ನು ನಿಗದಿತ ಅವಧಿಯಲ್ಲಿ ಸಾರ್ವಜನಿಕರಿಗೆ ತಲುಪಿಸಲು ಡೇಟಾ ಎಂಟ್ರಿ ಆಪರೇಟರ್ ಹುದ್ದೆಯ ಮಂಜೂರಾತಿ ಸಂಖ್ಯೆಯನ್ನು ದ್ವಿಗುಣಗೊಳಿಸಲು ಪ್ರಸಕ್ತ ಸನ್ನಿವೇಶದಲ್ಲಿ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)